ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20 ದಿನಾಂಕ: 30–09–2019

# ಪತ್ರಿಕಾ ಆಮಂತ್ರಣ

1. ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ ಪ್ರಾರಂಭಿಕ ಸಭೆ :

   ಅಧ್ಯಕ್ಷತೆ:

   ಬಸನಗೌಡ ಆರ್. ಪಾಟೀಲ್ ಯತ್ನಾಳ್,
   ಅಧ್ಯಕ್ಷರು,
   ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿ

   ದಿನಾಂಕ: 01–10–2019, ಮಂಗಳವಾರ ಸಮಯ: ಬೆಳಿಗ್ಗೆ 11.00 ಗಂಟೆಗೆ

   ಸ್ಥಳ: ಕೊಠಡಿ ಸಂಖ್ಯೆ – 119, ಮೊದಲನೇ ಮಹಡಿ, ವಿಧಾನಸೌಧ, ಬೆಂಗಳೂರು.

## *KIND ATTENTION*

### *GANDHI JAYANTHI CELEBRATIONS ON OCTOBER 2 AT 6-00 P M AT GLASS HOUSE OF RAJ BHAVAN*

*Governor Mr Vaju Bhai Vala inaugurates SATHYA AND AHIMSA MAHOTSAV - PAYING TRIBUTES TO THE FATHER OF THE NATION THROUGH MUSIC AND NON-VIOLENCE.*

*Kindly collect MEDIA INVITES on October 1 between 11-00 A M and 4-00 P M at the PRESS AND NEWS SECTION in the Department of Information and*

***Public Relations for the SATHYA AND AHIMSA MAHOTSAV for the 150th GANDHI JAYANTHI CELEBRATIONS AT THE GLASS HOUSE OF RAJ BHAVAN.***

***D. P. MURALIDHAR***
***DEPUTY DIRECTOR (NEWS)***

**<u>ಪತ್ರಿಕಾ ಪ್ರಕಟಣೆ</u>**

## ಗಾಂಧೀ ಜಯಂತಿ ವಿಶೇಷ :

## ಸ್ವಚ್ಛ ನಗರ ಹಾಗೂ ಸ್ವಾಸ್ಥ್ಯ ಪರಿಸರಕ್ಕಾಗಿ ಸೈಕಲ್ ಜಾಗೃತಿ ಜಾತಾ ಮತ್ತು ಸದ್ಭಾವನಾ ಪಾದಯಾತ್ರೆ

**ಬೆಂಗಳೂರು, ಸೆಪ್ಟೆಂಬರ್ 30 ( ಕರ್ನಾಟಕ ವಾರ್ತೆ ) :**

ಬಾ ಬಾಪು 150 ನೇ ಜನ್ಮ ವರ್ಷಾಚರಣೆ ಹಾಗೂ ರಾಷ್ಟ್ರೀಯ ಸೇವಾ ಯೋಜನೆಯ ಸುವರ್ಣ ಮಹೋತ್ಸವ ಸಮಾರೋಪದ ಅಂಗವಾಗಿ ಅಕ್ಟೋಬರ್ 2 ರಂದು ಸ್ವಚ್ಛ ನಗರ ಹಾಗೂ ಸ್ವಾಸ್ಥ್ಯ ಪರಿಸರಕ್ಕಾಗಿ ಸೈಕಲ್ ಜಾಗೃತಿ ಜಾಥಾ ಮತ್ತು ಸದ್ಭಾವನಾ ಪಾದಯಾತ್ರೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ವಾರ್ತಾ ಮತ್ತು ಪ್ರಸಾರ ಮಂತ್ರಾಲಯ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಷ್ಟ್ರೀಯ ಸೇವಾ ಯೋಜನೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಗಾಂಧಿ ಶಾಂತಿ ಪ್ರತಿಷ್ಠಾನ, ಗಾಂಧಿ ಅಧ್ಯಯನ ಕೇಂದ್ರ ಮತ್ತು ಹುತಾತ್ಮ ಮೈಲಾರ ಮಹಾದೇವ ರಾಷ್ಟ್ರೀಯ ಸ್ಮಾರಕ ಟ್ರಸ್ಟ್‌ನ ಸಹಕಾರ ಮತ್ತು ಸಹಯೋಗದೊಂದಿಗೆ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಈ ವಿಶೇಷ ಕಾರ್ಯಕ್ರಮವನ್ನು ವ್ಯವಸ್ಥೆಗೊಳಿಸಿದೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಜಿ ಕಲ್ಪನಾ ಅವರು ಅಂದು ಬೆಳಿಗ್ಗೆ 9–30 ಗಂಟೆಗೆ ನಗರದ ಆನಂದರಾವ್ ವೃತ್ತದಿಂದ ಗಾಂಧೀ ಭವನದ ವರೆಗೆ ಸದ್ಭಾವನಾ ಪಾದಯಾತ್ರೆಗೆ ಚಾಲನೆ ನೀಡಲಿದ್ದಾರೆ. ಅದೇ ಸಮಯದಲ್ಲಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಎಸ್ ಎನ್ ಸಿದ್ದರಾಮಪ್ಪ ಅವರು ನಗರದ ಮಹಾತ್ಮ ಗಾಂಧಿ ರಸ್ತೆಯಲ್ಲಿರುವ ಮಹಾತ್ಮ ಗಾಂಧಿ ಪ್ರತಿಮೆಯ ಬಳಿಯಿಂದ ಗಾಂಧಿ ಭವನದ ವರೆಗೆ ಸೈಕಲ್ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಿದ್ದಾರೆ.

ನಂತರ, ನಗರದ ಕುಮಾರ ಕೃಪ ರಸ್ತೆಯ ಗಾಂಧಿ ಭವನದ ಮೈಲಾರ ಮಹಾದೇವ ಸಭಾಂಗಣದಲ್ಲಿ ಬೆಳಿಗ್ಗೆ 11–00 ಗಂಟೆಗೆ ನಡೆಯಲಿರುವ ಪ್ರಧಾನ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಬಿ ಎಸ್ ಯಡಿಯೂರಪ್ಪ

ಅವರು ಗಾಂಧೀಜಿ ಅವರನ್ನು ಕುರಿತ ವಿಶೇಷ ಛಾಯಾಚಿತ್ರ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್ ಅವರು ಗಾಂಧೀ ಪುಸ್ತಕೋತ್ಸವ ಹಾಗೂ ಪುಸ್ತಕಗಳನ್ನು ಬಿಡುಗಡೆ ಮಾಡಲಿದ್ದಾರೆ.

ಇದೇ ಸಂದರ್ಭದಲ್ಲಿ ಗಾಂಧಿ 150 ಮತ್ತು ಗಾಂಧಿ ಭವನ ಕುರಿತ ವಿಶೇಷ ಲಕೋಟೆಯ ಲೋಕಾರ್ಪಣೆ, ಡಾ ಎನ್ ಜಗದೀಶ್ ಕೊಪ್ಪ ಅವರ ಗಾಂಧೀಗಿರಿಯ ಫಸಲುಗಳು ಕೃತಿಗೆ ಪುರಸ್ಕಾರ, ಚಾಮರಾಜನಗರದ ದೀನಬಂಧು ಮಕ್ಕಳ ಮೆಯ ಸಂಸ್ಥಾಪಕ ಜಿ ಎಸ್ ಜಯದೇವ್ ಹಾಗೂ ಹಿರಿಯ ಸ್ವಾಂತಂತ್ರ್ಯ ಹೋರಾಟಗಾರ ಸೂ ರಂ ರಾಮಯ್ಯ ಅವರಿಗೆ ಗೌರವಾರ್ಪಣೆ, ಆರ್ ಜಿ ಮುತಾಲಿಕ್ ದೇಸಾಯಿ ಅವರ ಕೃತಿ ಹುಕ್ಕೇರಿಕರ ರಾಮರಾಯರು, ಕನ್ನಡಾನುವಾದದ ಕೃತಿಗಳಾದ ಜಿ ಡಿ ದೇಸಾಯಿ ಅವರ ಮಹಿಳೆಯರು ಮತ್ತು ಹನುಮಂತರಾವ್ ಮಂಜ್ರೇಕರ್ ಅವರ ನನ್ನ ಬಾಲ್ಯದ ನೆನಪುಗಳು, ಪ್ರಣತಿ ಪ್ರತಾಪ್ ಅವರ ಆಂಗ್ಲ ಭಾಷಾ ಅನುವಾದದ ಕೃತಿ ಕಸ್ತೂರಬಾ ಲೋಕಾರ್ಪಣೆಯಾಗಲಿವೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

***********

ಡಿ ಪಿ ಎಂ

ಗಾಂಧೀ ಜಯಂತಿ ವಿಶೇಷ : ಪ್ರೊ. ಜಿ. ಎಸ್. ಜಯದೇವ ಅವರಿಗೆ ಮಹಾತ್ಮಾ ಗಾಂಧಿ ಸೇವಾ ಪ್ರಶಸ್ತಿ ಪ್ರದಾನ

ಬೆಂಗಳೂರು, ಸೆಪ್ಟೆಂಬರ್ 30 ( ಕರ್ನಾಟಕ ವಾರ್ತೆ ) :

ಮುಖ್ಯಮಂತ್ರಿ ಬಿ. ಎಸ್. ಯಡಿಯೂರಪ್ಪ ಅವರು ಅಕ್ಟೋಬರ್ 2 ರಂದು ಸಂಜೆ 5.00 ಗಂಟೆಗೆ ನಗರದ ರವೀಂದ್ರ ಕಲಾಕ್ಷೇತ್ರದಲ್ಲಿ ನಡೆಯಲಿರುವ ವಿಶೇಷ ಸಮಾರಂಭದಲ್ಲಿ ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ ಆಶಯಗಳನ್ನು ಪಸರಿಸುತ್ತಿರುವ ಹಾಗೂ ಪಾಲಿಸುತ್ತಿರುವ ವ್ಯಕ್ತಿಗಳಿಗೆ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕೊಡಮಾಡುವ ಐದು ಲಕ್ಷ ರೂ ನಗದು ಒಳಗೊಂಡ ಪ್ರತಿಷ್ಠಿತ ಮಹಾತ್ಮಾ ಗಾಂಧಿ ಸೇವಾ ಪ್ರಶಸ್ತಿಯನ್ನು ಪ್ರದಾನ ಮಾಡಲಿದ್ದಾರೆ.

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ಶಾಸಕ ಉದಯ ಗರುಡಾಚಾರ್ ಅವರು ಅಧ್ಯಕ್ಷತೆ ವಹಿಸಲಿರುವ ಈ ಸಮಾರಂಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಹಾಗೂ ಪ್ರವಾಸೋದ್ಯಮ ಸಚಿವ ಸಿ. ಟಿ. ರವಿ, ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ ಆಯ್ಕೆ ಸಮಿತಿಯ ಅಧ್ಯಕ್ಷರೂ ಆದ ಕರ್ನಾಟಕ ಉಚ್ಛ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿ ಭೀಮನಗೌಡ ಸಂಗನಗೌಡ ಪಾಟೀಲ್, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಲೋಕಸಭಾ ಸದಸ್ಯ ಪಿ. ಸಿ. ಮೋಹನ್, ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಅಧ್ಯಕ್ಷ ವೂಡೆ ಪಿ. ಕೃಷ್ಣ ಅವರೂ ಸೇರಿದಂತೆ ಹಲವು ಗಣ್ಯರು ಪಾಲ್ಗೊಳ್ಳಲಿದ್ದಾರೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತ ಎಸ್ ಎನ್ ಸಿದ್ದರಾಮಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***********

ಡಿ ಪಿ ಎಂ

ಗಾಂಧೀ ಜಯಂತಿ ವಿಶೇಷ : ರಾಜಭವನದ ಗಾಜಿನ ಮನೆಯಲ್ಲಿ ಸತ್ಯ ಮತ್ತು ಅಹಿಂಸಾ ಮಹೋತ್ಸವ

ಬೆಂಗಳೂರು, ಸೆಪ್ಟೆಂಬರ್ 30 ( ಕರ್ನಾಟಕ ವಾರ್ತೆ ) :

ರಾಷ್ಟ್ರಪಿತ ಮಹಾತ್ಮ ಗಾಂಧಿ ಅವರ 150 ನೇ ಜನ್ಮ ವರ್ಷಾಚರಣೆಯ ಸಂದರ್ಭದಲ್ಲಿ ಅಕ್ಟೋಬರ್ 2 ರಂದು ಸಂಜೆ 6-00 ಗಂಟೆಗೆ ರಾಜಭವನದ ಗಾಜಿನ ಮನೆಯಲ್ಲಿ ಸತ್ಯ ಮತ್ತು ಅಹಿಂಸಾ ಮಹೋತ್ಸವ ಹೆಸರಿನಲ್ಲಿ ನಡೆಯಲಿರುವ ಸಂಗೀತ ಮತ್ತು ನೃತ್ಯ ನಮನದ ಮೂಲಕ ಗಾಂಧೀಜಿ ಅವರಿಗೆ ಗೌರವ ಸಲ್ಲಿಸುವ ವಿಶೇಷ ಸಮಾರಂಭ ಇದಾಗಿದೆ.

ಬೆಂಗಳೂರು ದೂರದರ್ಶನ ಕೇಂದ್ರದ ಸಹಯೋಗ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಸರ್ವೋದಯ ಅಂತಾರಾಷ್ಟ್ರೀಯ ದತ್ತಿಯ ಸಹಕಾರದೊಂದಿಗೆ ಕರ್ನಾಟಕ ರಾಜಭವನವು ಈ ಸಮಾರಂಭವನ್ನು ಆಯೋಜಿಸಿದೆ.

ರಾಜ್ಯಪಾಲ ವಜುಭಾಯಿ ವಾಲಾ ಅವರು ಉದ್ಘಾಟಿಸಲಿರುವ ಈ ಸಮಾರಂಭದಲ್ಲಿ ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಡಿ ವಿ ಸದಾನಂದ ಗೌಡ, ಬೆಂಗಳೂರು ಕೇಂದ್ರ ಲೋಕಸಭಾ ಕ್ಷೇತ್ರದ ಸದಸ್ಯ ಪಿ ಸಿ ಮೋಹನ್, ಕರ್ನಾಟಕ ಗಾಂಧಿ ಸ್ಮಾರಕ ನಿಧಿಯ ಅಧ್ಯಕ್ಷ ಡಾ ವೂಡೇ ಪಿ ಕೃಷ್ಣ ಅವರು ಪಾಲ್ಗೊಳ್ಳಲಿದ್ದಾರೆ.

ಅಲ್ಲದೆ, ಬೇಲಿ ಮಠದದ ಶ್ರೀ ಶಿವರುದ್ರ ಮಹಾಸ್ವಾಮೀಜಿ, ಕ್ರೈಸ್ತ ಧರ್ಮದ ಬೆಂಗಳೂರಿನ ಮಹಾಧರ್ಮಾಧ್ಯಕ್ಷ ಡಾ ಪೀಟರ್ ಮಚಾದೊ, ಸಿಖ್ ಧರ್ಮದ ಗುರುಸಿಂಗ್ ಸಭಾದ ಅಧ್ಯಕ್ಷ ಪ್ರಭ್ಜೋತ್ ಸಿಂಗ್ ಬಾಲಿ, ಬೌದ್ಧ ಧರ್ಮದ ಮಹಾಬೋಧಿ ಸೊಸೈಟಿಯ ಪ್ರಧಾನ ಕಾರ್ಯದರ್ಶಿ ಆನಂದ ಭಂತೇಜ, ಇಸ್ಲಾಂ ಧರ್ಮವನ್ನು ಪ್ರತಿನಿಧಿಸುವ ಆಲ್ ಅಮಿನ್ ಎಜುಕೇಶನಲ್ ಸೊಸೈಟಿಯ ಗೌರವ ಕಾರ್ಯದರ್ಶಿ ಡಾ ಸುಭಾನ್ ಆರೀಫ್ ಹಾಗೂ ಜೋರಾಷ್ಟ್ರಿಯನ್-ಪಾರ್ಸಿ ಧರ್ಮದ ಮುಖ್ಯ ಅರ್ಚಕ ಎರ್ವಾಡ್ ಫರ್ಮಾನ್ ಕರ್ಕಾರಿಯಾ ಅವರೂ ತಮ್ಮ ಪಾಲ್ಗೊಳ್ಳುವಿಕೆಯಿಂದ ಸಮಾರಂಭಕ್ಕೆ ಶೋಭೆ ತಂದು ಕೊಡಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

***********

ಡಿ ಪಿ ಎಂ

## ಎಲ್ಲಾ ವರ್ಗದ ನಿರುದ್ಯೋಗಿ ಯುವಕ ಯುವತಿಯರಿಗೆ ಉಚಿತ ತರಬೇತಿ

ಬೆಂಗಳೂರು, ಸೆಪ್ಟೆಂಬರ್ 30 ( ಕರ್ನಾಟಕ ವಾರ್ತೆ ) :

**ಕೈಗಾರಿಕೆ ಮತ್ತು ವಾಣಿಜ್ಯ ನಿರ್ದೇಶನಾಲಯ ಬೆಂಗಳೂರು ಮತ್ತು ಬ್ಯಾಂಕ್ ನೋಟ್ ಪೇಪರ್ ಮಿಲ್ ಇಂಡಿಯಾ ಪ್ರೈವೇಟ್ ಲಿಮಿಟೆಡ್, ಮೈಸೂರು ಭಾರತ ಸರ್ಕಾರ ಇವರ ಪ್ರಾಯೋಜಿತ ಎಲ್ಲಾ ವರ್ಗದ ಹತ್ತನೆ ತರಗತಿ ಪಾಸಾದ/ಫೈಲ್ 10th pass/fail/PUC/Any Degree, ITI/Diploma (Pass/Fail) ವಿದ್ಯಾರ್ಹತೆ ಹೊಂದಿದ ನಿರುದ್ಯೋಗಿ ಯುವಕ ಯುವತಿಯರಿಗೆ ಮೈಸೂರಿನಲ್ಲಿ ಇರುವ ಕೇಂದ್ರ ಸರ್ಕಾರದ ಸೆಂಟ್ರಲ್ ಇನ್ಸ್ಟಿಟ್ಯೂಟ್ ಆಫ್ ಪ್ಲಾಸ್ಟಿಕ್ ಇಂಜಿನೀಯರಿಂಗ್ ಅಂಡ್ ಟೆಕ್ನಾಲಜಿ(CIPET) ಸಂಸ್ಥೆಯಲ್ಲಿ 3/6 ತಿಂಗಳ ಅವಧಿಯ ಪಾಲಿಮಾರ್ ವಸ್ತುಗಳ ತಯಾರಿಕಾ ತಂತ್ರಜ್ಞಾನದ ವಾಹನಗಳ ಬಿಢಿಭಾಗಗಳು, ವಿದ್ಯುತ್ ಉಪಕರಣಗಳು, ಕಂಪ್ಯೂಟರ್ ಬಿಡಿಭಾಗಗಳು, ಮೊಬೈಲ್ ಬಿಡಿಭಾಗಗಳು ಇತ್ಯಾದಿ ವಸ್ತುಗಳ ತಯಾರಿಕೆಗೆ ಉಚಿತ ತರಬೇತಿ, ಊಟ, ವಸತಿ ಹಾಗೂ ಉದ್ಯೋಗವಕಾಶಕ್ಕೆ ನೆರವು ನೀಡಲಾಗುವುದು.**

**ತರಬೇತಿಗೆ ಸೇರಲು ಆಸಕ್ತಿಯುಳ್ಳ ಅಭ್ಯರ್ಥಿಯು ತಮ್ಮ ವಿದ್ಯಾರ್ಹತೆಗೆ ಸಂಬಂಧಿಸಿದ ಅಂಕಪಟ್ಟಿ, ಜಾತಿ, ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಮೂಲ ದಾಖಲೆಗಳ (ORIGINALS) 5 ಪಾಸ್‌ಪೋರ್ಟ್ ಅಳತೆಯ ಫೋಟೋ ಮತ್ತು ಜೆರಾಕ್ಸ್ ಪ್ರತಿಗಳೊಂದಿಗೆ ನೇರವಾಗಿ ಬಂದು ದಾಖಲಾತಿ (Admission) ಪಡೆಯಬಹುದಾಗಿದೆ.**

**ಹೆಚ್ಚಿನ ಮಾಹಿತಿಗಾಗಿ ಸೆಂಟ್ರಲ್ ಇನ್ಸ್ಟಿಟ್ಯೂಟ್ ಆಫ್ ಪ್ಲಾಸ್ಟಿಕ್ಸ್ ಇಂಜೀನಿಯರಿಂಗ್ ಅಂಡ್ ಟೆಕ್ನಾಲಜಿ, 437/ಎ, ಹೆಬ್ಬಾಳ ಕೈಗಾರಿಕಾ ಪ್ರದೇಶ, ಮೈಸೂರು – 570 016 ದೂರವಾಣಿ ಸಂಖ್ಯೆ 78999 86444, 8867686766, 94661 46001.ಅಥವಾ E-mail cipetmys1@gmail.com, website www.cipet.gov.in ಮೂಲಕ ಸಂಪರ್ಕಿಸಬಹುದಾಗಿದೆ.**

## ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ 54ನೇ ಸಂಸ್ಥಾಪನಾ ದಿನಾಚರಣೆ

**ಬೆಂಗಳೂರು, ಸೆಪ್ಟೆಂಬರ್ 30 (ಕರ್ನಾಟಕ ವಾರ್ತೆ)**

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ 54ನೇ ಸಂಸ್ಥಾಪನಾ ದಿನಾಚರಣೆಯು ದಿನಾಂಕ:01–10–2019 (ಮಂಗಳವಾರ) ಮಧ್ಯಾಹ್ನ 12–30 ಗಂಟೆಗೆ, ಗಾಂಧಿ ಕೃಷಿ ವಿಜ್ಞಾನ ಕೇಂದ್ರದ (ಜಿಕೆವಿಕೆ)ಯ ಡಾ|| ಬಾಬು ರಾಜೇಂದ್ರ ಪ್ರಸಾದ್ ಅಂತರರಾಷ್ಟ್ರೀಯ ಸಮಾವೇಶ ಸಭಾಂಗಣದಲ್ಲಿ ಜರುಗಲಿದೆ. **ಶ್ರೀ ಬಿ.ಎಸ್. ಯಡಿಯೂರಪ್ಪ,** ಮಾನ್ಯ ಮುಖ್ಯ ಮಂತ್ರಿಗಳು ಮತ್ತು ಕೃಷಿ ಸಚಿವರು, ಕರ್ನಾಟಕ ಸರ್ಕಾರ ಹಾಗೂ ಸಹ ಕುಲಾಧಿಪತಿಗಳು, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ರವರು ಉದ್ಘಾಟನೆ ನೆರವೇರಿಸಲಿದ್ದಾರೆ. **ಡಾ. ಕೃಷ್ಣ. ಎಂ. ಎಲ್ಲ,** ಅಧ್ಯಕ್ಷರು ಹಾಗೂ ನಿರ್ವಾಹಕರು, ಭಾರತ್ ಬಯೋಟೆಕ್ ಇಂಟರ್‌ನ್ಯಾಷನಲ್ ಲಿ., ಹೈದರಾಬಾದ್ ರವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ **ಡಾ. ಎಸ್. ರಾಜೇಂದ್ರ ಪ್ರಸಾದ್** ರವರು ವಹಿಸಲಿದ್ದಾರೆ. ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ವ್ಯವಸ್ಥಾಪನಾ ಮಂಡಳಿಯ ಸದಸ್ಯರು, ವಿಶೇಷ ಆಹ್ವಾನಿತರಾಗಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಡಾ|| ಕಾಳಯ್ಯ ಕೃಷ್ಣಮೂರ್ತಿ, ರಾಷ್ಟ್ರೀಯ ಅತ್ಯುತ್ತಮ ಕೃಷಿ ಸಂಶೋಧನಾ ಪ್ರಶಸ್ತಿ, ನಾಗಮ್ಮ ದತ್ತಾತ್ರೇಯ ರಾವ್ ಪ್ರಶಸ್ತಿ, ಅತ್ಯುತ್ತಮ

ಶಿಕ್ಷಕ ಪ್ರಶಸ್ತಿ, ಮೆ॥ ಜುವಾರಿ ಇಂಡಸ್ಟ್ರೀಸ್ ಲಿಮಿಟೆಡ್ ಅತ್ಯುತ್ತಮ ವಿಸ್ತರಣಾ ಕಾರ್ಯಕರ್ತ ಪ್ರಶಸ್ತಿ, ಅತ್ಯುತ್ತಮ ಸೇವಾ ಸಿಬ್ಬಂದಿ ಪ್ರಶಸ್ತಿ ಮತ್ತು ಕನ್ನಡ ಕೃಷಿ ಪುಸ್ತಕ ಪ್ರಶಸ್ತಿಗಳನ್ನು ನೀಡಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 30 (ಕರ್ನಾಟಕ ವಾರ್ತೆ)**

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವ ಶ್ರೀ ಎಸ್. ಸುರೇಶ್‌ಕುಮಾರ್ ಅವರು ಅಕ್ಟೋಬರ್ 1 ರಂದು ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.

## ಸಚಿವರ ಪ್ರವಾಸ

**ಬೆಂಗಳೂರು, ಸೆಪ್ಟೆಂಬರ್ 30 (ಕರ್ನಾಟಕ ವಾರ್ತೆ)**

ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಶ್ರೀ ಜಗದೀಶ್ ಶೆಟ್ಟರ್ ಅವರು ಅಕ್ಟೋಬರ್ 1 ಮತ್ತು 2 ರಂದು ಧಾರವಾಡ ಹಾಗೂ ಬೆಳಗಾವಿ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಕ್ಟೋಬರ್ 2 ರಂದು ರಾತ್ರಿ ಕೇಂದ್ರಸ್ಥಾನಕ್ಕೆ ಹಿಂತಿರುಗುವರು.